2405.00.101-0.03. 106

4th Qtr.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2019-20ನೇ ಸಾಲಿನ ಮೀನುಗಾರಿಕೆ ಇಲಾಖೆಯ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ ಅಡಿಯಲ್ಲಿ ಬಾಕಿ ಇರುವ ನಾಲ್ಕನೇ ಕಂತಿನ ರೂ.129.75 ಲಕ್ಷಗಳ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:- 1) ಆದೇಶ ಸಂಖ್ಯೆ: ಪಸಂಮೀ/52/ಮೀಇಯೋ/2019, ದಿನಾಂಕ: 15-04-2019.

2) ಆದೇಶ ಸಂಖ್ಯೆ: ಪಸಂಮೀ/59/ಮೀಇಯೋ/2019, ದಿನಾಂಕ: 04-05-2019

3) ಆದೇಶ ಸಂಖ್ಯೆ: ಪಸಂಮೀ/ಇ-54/ಮೀಇಯೋ/2019, ದಿನಾಂಕ: 08-08-2019.

4) ಆದೇಶ ಸಂಖ್ಯೆ: ಪಸಂಮೀ/ಇ-104/ಮೀಇಯೋ/2019, ದಿನಾಂಕ: 24-10-2019, 20-12-2019, 27-01-2020 ಮತ್ತು 05-02-2020.

5) ಪತ್ರ ಸಂಖ್ಯೆ: ಮೀನಿ/11/ಬಿಜಿಟಿ/2019, ದಿನಾಂಕ: 24-02-2020

******

## ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶದಲ್ಲಿ ಮೀನುಗಾರಿಕೆ ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ವಿವಿಧ ರಾಜ್ಯ ವಲಯ, ಕೇಂದ್ರ ವಲಯ ಮತ್ತು ಕೇಂದ್ರ ಪುರಸ್ಕೃತ ಜಿಲ್ಲಾ ಪಂಚಾಯತ್ ಯೋಜನೆಗಳನ್ನು ಸಂಬಂಧಪಟ್ಟ ಹುದ್ದೆಗಳೊಂದಿಗೆ 2019-20ನೇ ಸಾಲಿಗೆ ಮುಂದುವರೆಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)(3) ಮತ್ತು (4)ರಲ್ಲಿ ಓದಲಾದ ಆದೇಶಗಳಲ್ಲಿ, ಕ್ರಮವಾಗಿ ಪ್ರಥಮ ಕಂತಿನ ಅನುದಾನ ರೂ.6,112.00 ಲಕ್ಷಗಳನ್ನು ಮತ್ತು ದ್ವಿತೀಯ ಕಂತಾಗಿ ರೂ.5,944.52 ಲಕ್ಷಗಳನ್ನು ಮತ್ತು ತೃತೀಯ ಕಂತಾಗಿ ರೂ.4512.02 ಲಕ್ಷಗಳನ್ನು, ರೂ.194.00 ಲಕ್ಷಗಳನ್ನು ಮತ್ತು ರೂ.259.50 ಲಕ್ಷಗಳನ್ನು ಮತ್ತು 4ನೇ ಕಂತಿನ ಅನುದಾನ ರೂ.5,247.88 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (5)ರಲ್ಲಿ ಓದಲಾದ ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ಇವರ ಪತ್ರದಲ್ಲಿ, 2019-20ನೇ ಸಾಲಿನ ಲೆಕ್ಕ ಶೀರ್ಷಿಕೆ 2405-00-101-0-03-106 ರಡಿ ರೂ.129.75 ಲಕ್ಷಗಳ 4ನೇ ಕಂತಿನ ಅನುದಾನ ಬಿಡುಗಡೆಗೊಳಿಸಲು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ರಾಜ್ಯವಲಯದ ಯೋಜನೆಗಳಡಿ ಬಾಕಿ ಇರುವ 4ನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ ಇ-104 ಮೀಇಯೋ 2019, ಬೆಂಗಳೂರು ದಿನಾಂಕ: 06-03-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ರಾಜ್ಯವಲಯದಡಿ ರೂ.129.75 ಲಕ್ಷ (ಒಂದುನೂರ ಇಪ್ಪತ್ತೊಂಬತ್ತು ಲಕ್ಷದ

ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಕೆಳಕಂಡ ಲೆಕ್ಕ ಶೀರ್ಷಿಕೆ ಮುಂದೆ ನಮೂದಿಸಿರುವಂತೆ ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡಿದೆ.

(ರೂ.ಲಕ್ಷಗಳಲ್ಲಿ)

| ಕ್ರ ಸಂ | ಯೋಜನೆಯ ಹೆಸರು | ಲೆಕ್ಕ ಶೀರ್ಷಿಕೆ | ಆಯವ್ಯಯ 2019-20 ರಲ್ಲಿ ಒದಗಿಸಿದ ಅನುದಾನ | 2019-20ರಲ್ಲಿ 4ನೇ ಕಂತಿನಲ್ಲಿ ಬಿಡುಗಡೆ ಮಾಡಬೇಕಾದ ಅನುದಾನ |
|---|---|---|---|---|
| 1 | ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ | 2405-00-101-0-03 | | |
| | ಸಹಾಯಧನ | 106 | 519.00 | 129.75 |

ಮೇಲ್ಕಂಡಂತೆ ಬಿಡುಗಡೆ ಮಾಡಲಾದ ಅನುದಾನದ ಹಣವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಉಪಯೋಗಿಸಿಕೊಂಡು ಕಡ್ಡಾಯವಾಗಿ ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಫಲಾನುಭವಿಗಳ ಆಯ್ಕೆಯನ್ನು ನಿಯಮಾನುಸಾರ ಪಾರದರ್ಶಕತೆಯಿಂದ ಮಾಡತಕ್ಕದ್ದು. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ನಿಯಮಗಳು 2000ಗಳನ್ನು ಹಾಗೂ ಖರೀದಿ ನಿಯಮಗಳನ್ನು ಪಾಲಿಸತಕ್ಕದ್ದು ಮತ್ತು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಖ2/ಪಿಎಂಯು/92/2015-16, ದಿನಾಂಕ: 27-03-2018ರ ಕ್ರಮ ಸಂಖ್ಯೆ 01 ರಿಂದ 04 ರಲ್ಲಿ ಸೂಚಿಸಿರುವಂತೆ ಅನುಷ್ಠಾನಗೊಳಿಸತಕ್ಕದ್ದು. ಹಾಗೂ ಆದೇಶವನ್ನು, ಬಿಡುಗಡೆ ಮತ್ತು ವೆಚ್ಚದ ವಿವರಗಳನ್ನು ಮೀನುಗಾರಿಕೆ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಹಾಕುವುದು.

ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/52/ಮೀಇಯೋ/2019, ದಿನಾಂಕ: 15-04-2019 ರನ್ವಯ ಮುಂದುವರೆಸಲಾದ ಯೋಜನೆಗಳನ್ನು ಅನುಮೋದಿಸಿರುವಂತೆ ಅನುಷ್ಠಾನಗೊಳಿಸತಕ್ಕದ್ದು.

ಸದರಿ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ರಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/1/ಟಿಎಫ್‌ಪಿ/2020, ದಿನಾಂಕ: 13-01-2020 ರಲ್ಲಿ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ. ಹಾಗೂ ಸುತ್ತೋಲೆ ಸಂಖ್ಯೆ: ಎಫ್‌ಡಿ/01/ಟಿಎಫ್‌ಪಿ/2019, ದಿನಾಂಕ: 20-08-2019 ರಲ್ಲಿ ನಮೂದಿಸಿರುವ ಷರತ್ತು ಮತ್ತು ನಿಯಮಗಳನ್ನು ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Kamakshi U.A
(ಕಾಮಾಕ್ಷಿ.ಯು.ಎ.) 6/3/2020
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

ಇವರಿಗೆ:

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.